# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಶಿವಾಜಿನಗರ ಉಪವಿಭಾಗ ಹಲಸೂರು ಕೆರೆರಸ್ತೆ, ಬೆಂಗಳೂರು-42

---

ಸಂಖ್ಯೆ:ಸ.ಇಂ/ವಾ-91/ವಾರ್ಡ್‌ಸಭೆ/ 20 /2021-22 ದಿನಾಂಕ:10-12-2021

## ವಾರ್ಡ್-91 ರ ವಾರ್ಡ್ ಸಭೆಯ ನಡವಳಿ

ದಿನಾಂಕ: 10-12-2021 ರಂದು ಶಿವಾಜಿನಗರ ಉಪ ವಿಭಾಗ ವಾರ್ಡ್-91, ಭಾರತಿನಗರ ವಾರ್ಡ್ ಕಛೇರಿಯಲ್ಲಿ ಶ್ರೀ.ರವಿ, ವಾರ್ಡ್-91 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

ಹಾಜರಿದ್ದವರು:

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ.ರವಿ | ಸಹಾಯಕ ನಿಯಂತ್ರಕರು (ಹಣಕಾಸು-ದಕ್ಷಿಣ) ಹಾಗೂ ನೋಡಲ್ ಅಧಿಕಾರಿ ವಾರ್ಡ್-91 |
| 2 | ಶ್ರೀ ಸೈಫುದ್ದಿನ್. | ಸಕಾನಿಅ ಶಿವಾಜಿನಗರ ಉಪ ವಿಭಾಗ |
| 3 | ಶ್ರೀ ನವೀನ್ ಕುಮಾರ್ | ಆರೋಗ್ಯ ವೈದ್ಯಾಧಿಕಾರಿ, ಶಿವಾಜಿನಗರ ವಲಯ |
| 4 | ಶ್ರೀ ಜ್ಯೋತಿ ಲಕ್ಷ್ಮೀ | ಸ.ಕ.ಅ(ಶಿವಾಜಿನಗರ) |
| 5 | ಶ್ರೀ ಪ್ರವೀಣ್.ಎನ್.ಎಂ. | ಸಅ ಹಾಗೂ ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ಸಂಖ್ಯೆ:91 |
| 6 | ಶ್ರೀ ಜಾವೀದ್ | ಸಕಾನಿಅ(ಘ.ತ್ಯಾ.ನಿ) ಶಿವಾಜಿನಗರ ವಿಭಾಗ (ಪ್ರಭಾರೆ) |
| 7 | ಶ್ರೀ ಸತೀಶ್. | ಕಂದಾಯ ಪರಿವೀಕ್ಷಕರು |
| 8 | ಶ್ರೀ ರಾಜೇಶ್. | ಸ.ಅ(ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 9 | ಶ್ರೀ ಲಕ್ಷ್ಮಣ್. | ಸ.ಅ(ಬೆಸ್ಕಾಂ) |
| 10 | ಶ್ರೀ ಆಕಾಶ್ | ಗುತ್ತಿಗೆ ಕಿರಿಯ ಆರೋಗ್ಯ ಪರಿವೀಕ್ಷಕರು |

ಮಾನ್ಯ ನೋಡಲ್ ಅಧಿಕಾರಿರವರ ಸ್ವಾಗತದೊಂದಿಗೆ ಅಧಿಕಾರಿಗಳ / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಬಿಸಲಾಯಿತು.

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಶಿವಾಜಿನಗರ ಉಪ ವಿಭಾಗದ ವಾರ್ಡ್ ಸಂಖ್ಯೆ:91 ರ ವ್ಯಾಪ್ತಿಯಲ್ಲಿ ಸಾರ್ವಜನಿಕರ ಆರೋಗ್ಯ ಕೇಂದ್ರದ ವೈಧ್ಯಾಧಿಕಾರಿಗಳು ಕೋವಿಡ್ ಪರೀಕ್ಷೆಯ ವಿವರಗಳನ್ನು ಸಭೆಗೆ ಈ ಕೆಳಕಂಡಂತೆ ವಿವರಗಳನ್ನು ನೀಡಿದರು.

- ನೋಡಲ್ ಅಧಿಕಾರಿರವರು ಮಾತಾನಾಡುತ್ತ ಬೆಂಗಳೂರು ನಗರದಲ್ಲಿ ಓಮೀಕ್ರಾನ್ ಎಂಬ ಹೊಸ ವೈರಸ್ ಪತ್ತೆಯಾಗಿದ್ದು, ಆರೋಗ್ಯ ವೈಧ್ಯಾಧಿಕಾರಿಗಳಗೆ ಇದರ ಬಗ್ಗೆ ನಿಗಾವಹಿಸಿ ಸಾರ್ವಜನಿಕರಲ್ಲಿ ಸಾಮಾಜಿಕ ಅಂತರ ಕಾಪಾಡಲು ಹಾಗೂ ಮಾಸ್ಕ್‌ಗಳನ್ನು ಕಡ್ಡಾಯವಾಗಿ ಧರಿಸಲು ಸೂಚಿಸಿರುತ್ತಾರೆ.
- ನೋಡಲ್ ಅಧಿಕಾರಿರವರು ಮಾತಾನಾಡುತ್ತ ಸಾರ್ವಜನಿಕ ಸ್ಥಳಗಳಲ್ಲಿ ಮಾಸ್ಕ್ ಧರಿಸದೆ ಇರುವವರು ಸಾಮಾಜಿಕ ಅಂತರ ಕಾಪಾಡದೆ ಇರುವವರಿಗೆ ಮಾರ್ಷಲ್ ರವರಿಗೆ ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಹಾಗೂ ದಂಡ ವಿಧಿಸಲು ಸೂಚಿಸಿರುತ್ತಾರೆ.
- ನೋಡಲ್ ಅಧಿಕಾರಿರವರು ಮಾತಾನಾಡುತ್ತ ಕಸವಿಲೇವಾರಿ ಸಮರ್ಪಕವಾಗಿ ನಡೆಯದೇ ಇರುವುದು ಕಂಡುಬಂದಿದ್ದು, ಸಾರ್ವಜನಿಕರಿಂದ ದೂರುಗಳು ಬಂದಿರುತ್ತದೆ. ಆದ್ದುದರಿಂದ ಕಸ ವಲೇವಾರಿ ಬಗ್ಗೆ ಆದಷ್ಟು ಗಮನವಹಿಸಿ ಸಮರ್ಪಕವಾಗಿ ಕೆಲಸ ನಿರ್ವಹಿಸಲು ಸೂಚಿಸಿದೆ. ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳ ವಿವರ ಈ ಕೆಳಕಂಡಂತಿದೆ.

ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ಶಿವಾಜಿನಗರ ವಿಭಾಗ

* ಶಿವಾಜಿನಗರ ಉಪ ವಿಭಾಗದ ವಾರ್ಡ್ ಸಂಖ್ಯೆ:91 ರ ವ್ಯಾಪ್ತಿಯಲ್ಲಿ ವಯಸ್ಕರರು ಮತ್ತು ಸಾರ್ವಜನಿಕರು ಸಂಜೆ ಮತ್ತು ಬೆಳಗ್ಗೆ ವಾಕಿಂಗ್ ಮಾಡುವಾಗ ಹಲವು ಕಡೆಯಲ್ಲಿ ಬೀದಿ ದೀಪಗಳು ಕೆಟ್ಟು ಹೋಗಿದ್ದು ಹಲವಾರು ರೀತಿಯ ತೊಂದರೆಗಳಿಗೆ ಕಾರಣವಾಗುವ ಸಾಧ್ಯತೆಗಳು ಹೆಚ್ಚಾಗಿರುವುದರಿಂದ ಮತ್ತು ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಆದಷ್ಟು ಬೇಗನೆ ಎಲ್ಲಾ ಬೀದಿ ದೀಪಗಳ ತಪಾಸಣೆ ನಡೆಸಿ ಎಷ್ಟು ದೀಪಗಳು ಚಾಲನೆಯಲ್ಲಿವೆ ಮತ್ತು ಎಷ್ಟು ದೀಪಗಳು ಕೆಟ್ಟು ಹೋಗಿವೆ ಎಂಬ ವಿವರವನ್ನು ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿರುತ್ತಾರೆ.

<u>ಬಿ.ಬಿ.ಎಂ.ಪಿ ಎಲೆಕ್ಟ್ರಿಕಲ್</u>

* ನೋಡಲ್ ಅಧಿಕಾರಿಗಳೂ ಮಾತಾನಾಡುತ್ತ ಮಳೆಯಿಂದಾಗಿ ಹಳೆಯ ಕಟ್ಟಡಗಳು ಕುಸಿದು ಬೀಳುತ್ತಿದ್ದು, ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಹಾಗೂ ಮುಂಜಾಗ್ರತೆಯಿಂದ ಹಳೆ ಕಟ್ಟಡಗಳನ್ನು ಗುರುತಿಸಿ ಅಲ್ಲಿ ವಾಸವಿರುವವರಿಗೆ ಇದರ ಬಗ್ಗೆ ತಿಳುವಳಿಕೆ ನೀಡಿ ಮುಂದಾಗುವ ಅನಾಹುತ ತಪ್ಪಿಸಲು ಸೂಚಿಸಿರುತ್ತಾರೆ.
* ವಾರ್ಡ್‌ನಲ್ಲಿ ವಿವಿಧ ಕಲ್ಯಾಣ ಕಾರ್ಯಕ್ರಮದ ಅಡಿಯಲ್ಲಿ ಅರ್ಹ ಫಲಾನುಭವಿಗಳಿಂದ ಆಹ್ವಾನಿಸಲಾಗಿರುವ ಅರ್ಜಿಗಳನ್ನು ಪರಿಶೀಲಿಸಲಾಯಿತು, ಒಂಟಿ ಮನೆ ನಿರ್ಮಾಣಕ್ಕಾಗಿ, ಹೊಲಿಗೆಯಂತ್ರ, ಕಂಪ್ಯೂಟರ್ ಲ್ಯಾಪ್‌ಟಪ್ ಹಾಗೂ ಇತರೆ ಸೌಲಭ್ಯಕ್ಕಾಗಿ ಬಂದಿರುವ ಅರ್ಜಿಗಳಲ್ಲಿ ಕೂಡಲೇ ಪರಿಶೀಲಿಸಿ ಫಲಾನುಭವಿಗಳನ್ನು ಆಯ್ಕೆ ಮಾಡಲು, ಸದರಿ ಪಲಾನುಭವಿಗಳಿಗೆ ತ್ವರಿತವಾಗಿ ಅನುದಾನವನ್ನು ಬಿಡುಗಡೆ ಮಾಡಲು ಸೂಕ್ತ ಕ್ರಮ ವಹಿಸಲು ಸೂಚಿಸಿರುತ್ತಾರೆ. ಸಂಬಂಧಪಟ್ಟ ಅಧಿಕಾರಿಗಳು ಇದರ ಬಗ್ಗೆ ಅವಶ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಭೆಗೆ ತಿಳಿಸಿರುತ್ತಾರೆ

<u>ಹಿರಿಯ ಆರೋಗ್ಯ ಪರಿವೀಕ್ಷಕರು (ಶಿವಾಜಿನಗರ)</u>

* ನೋಡಲ್ ಅಧಿಕಾರಿರವರು ಮಾತಾನಾಡುತ್ತ ಇತ್ತೀಚೆಗೆ ಮಳೆ ಹೆಚ್ಚಾಗಿದ್ದು, ಸಾರ್ವಜನಿಕರಿಗೆ ಹಲವಾರು ರೀತಿಯಲ್ಲಿ ತೊಂದರೆಯಾಗುತ್ತಿರುತ್ತದೆ ಸಾರ್ವಜನಿಕರಿಂದ ಬರುವ ದೂರುಗಳ ಬಗ್ಗೆ ನಿಗಾವಹಿಸಿ ಮುಂದಿನ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿರುತ್ತಾರೆ ಮತ್ತು ಹಲವಾರು ಕಟ್ಟಡಗಳು ಶಿಥಿಲಗೊಂಡಿದ್ದು ಗೋಡೆಗಳು ಕುಸಿಯುವ ಸಾಧ್ಯತೆಗಳು ಹೆಚ್ಚಿರುವುದರಿಂದ ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಇದರ ಬಗ್ಗೆ ಅವಶ್ಯ ಕ್ರಮ ಕೈಗೊಳ್ಳಲು ತಿಳಿಸಿರುತ್ತಾರೆ

ಅಂತಿಮವಾಗಿ ನೋಡಲ್ ಅಧಿಕಾರಿರವರು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಕಾರ್ಯದರ್ಶಿಯವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡಲ್ ಅಧಿಕಾರಿರವರ ಸೂಚನೆಗಳಂತೆ ಸಹಿ ಮಾಡಿ ಮಂಡಿಸಿದೆ.

(ಪ್ರವೀಣ್.ಎನ್.ಎಂ)
ಸ.ಅ & ಕಾರ್ಯದರ್ಶಿ
ವಾರ್ಡ್-91, ಭಾರತೀನಗರ